**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರ ನಿಯಮ 330ಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ**

ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ವಿದ್ಯಾರ್ಥಿಗಳಿಗೆ 1,2,3 ಎಂದು ಮೂರು ಪರೀಕ್ಷೆಗಳನ್ನು ನಡೆಸಲು ತೀರ್ಮಾನಿಸಿರುವುದು, ಪರೀಕ್ಷೆ ಸಂಬಂಧ ಅವೈಜ್ಞಾನಿಕವಾಗಿ ಕೆಲವು ಬದಲಾವಣೆಗಳನ್ನು ತರುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆಗಳು ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯ ಭಾರವನ್ನು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯವರ ಮೇಲುಸ್ತುವಾರಿಗೆ ನೀಡುತ್ತಿರುವುದು ಅವೈಜ್ಞಾನಿಕವಾಗಿರುವುದಲ್ಲದೆ, ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿ ಉಂಟಾಗುತ್ತಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ**

ಹಿಂದಿನ ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಒಂದು ವಾರ್ಷಿಕ ಪರೀಕ್ಷೆ ಮತ್ತು ಒಂದು ಪೂರಕ ಪರೀಕ್ಷೆಯನ್ನು ನಡೆಸಲಾಗುತ್ತಿತ್ತು. 2022-2023ನೇ ಸಾಲಿನಿಂದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಎರಡನೇ ಪೂರಕ ಪರೀಕ್ಷೆಯನ್ನು ನಡೆಸಿದ್ದರಿಂದ ಸದರಿ ಪರೀಕ್ಷೆಗೆ ಹಾಜರಾದ 1,19,183 ವಿದ್ಯಾರ್ಥಿಗಳಲ್ಲಿ 41,961 ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾರೆ. ಇದರಿಂದಾಗಿ ಅಷ್ಟು ವಿದ್ಯಾರ್ಥಿಗಳು ಉನ್ನತ ಶಿಕ್ಷಣಕ್ಕೆ ದಾಖಲಾತಿ ಪಡೆಯಲು ಸಹಾಯಕವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಮುಖ್ಯ ಪರೀಕ್ಷೆ ಮತ್ತು ಪೂರಕ ಪರೀಕ್ಷೆಗೆ ಬದಲಾಗಿ 2023-2024 ರಿಂದ ವಾರ್ಷಿಕವಾಗಿ ಪರೀಕ್ಷೆ-1, 2 ಮತ್ತು 3 ಎಂದು ಒಟ್ಟು ಮೂರು ಪರೀಕ್ಷೆಗಳನ್ನು ನಡೆಸಲು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಮೂರು ಪರೀಕ್ಷೆಗಳನ್ನು ನಡೆಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ವರ್ಷಕ್ಕೆ ಮೂರು ಪರೀಕ್ಷೆಗಳನ್ನು ನಡೆಸುವುದರಿಂದ ವಿದ್ಯಾರ್ಥಿಗಳಿಗೆ ಒಂದು ಹೆಚ್ಚುವರಿ ಅವಕಾಶ ಲಭಿಸಿದಂತಾಗುತ್ತದೆ. ಇದರಿಂದಾಗಿ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ತೇರ್ಗಡೆ ಹೊಂದಿ ಮುಂದಿನ ವ್ಯಾಸಂಗಕ್ಕೆ ದಾಖಲಾತಿ ಪಡೆಯುವುದರಿಂದ ಸದರಿ ವಿದ್ಯಾರ್ಥಿಗಳ ಭವಿಷ್ಯದ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗುತ್ತದೆ.

ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆಯ ಜಿಲ್ಲಾ ಮಟ್ಟದ ಕಚೇರಿಯ ದೈನಂದಿನ ಕಾರ್ಯಗಳನ್ನು ಪರಿಣಾಮಕಾರಿಯಾಗಿ ಮೇಲುಸ್ತುವಾರಿ ಮಾಡುವ ಅವಶ್ಯಕತೆ ಇರುವ ಕಾರಣ ಜಿಲ್ಲಾ ಮಟ್ಟದ ಮುಖ್ಯ ಅಧಿಕಾರಿಯಾದ ಉಪ ನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಇವರನ್ನು ಸಂಬಂಧಪಟ್ಟ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿಲ್ಲಾ ಪಂಚಾಯತ್ ಇವರ ಮೇಲುಸ್ತುವಾರಿ ಸುಪರ್ದಿಗೆ ಮತ್ತು ಅದೇ ರೀತಿ ಧಾರವಾಡ ಹಾಗೂ ಕಲಬುರಗಿ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಇವರನ್ನು ಸಂಬಂಧಪಟ್ಟ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಹಾಗೂ ಸಂಬಂಧಪಟ್ಟ ಜಿಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್ ಇವರುಗಳ ಮೇಲುಸ್ತುವಾರಿಗೆ ವಹಿಸಿ ಸರ್ಕಾರದ ಸುತ್ತೋಲೆ ಸಂಖ್ಯೆ: ಇಪಿ 67 ಟಿಪಿಯು 2023 ದಿನಾಂಕ:18-10-2023ರಲ್ಲಿ ತಿಳಿಸಲಾಗಿರುತ್ತದೆ.

ಪದವಿ ಪೂರ್ವ ಕಾಲೇಜುಗಳ ಮೇಲುಸ್ತುವಾರಿಯನ್ನು ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಮತ್ತು ಅಪರ ಆಯುಕ್ತರಿಗೆ ವಹಿಸಲಾಗಿರುವುದಿಲ್ಲ. ಆದರೆ, ಉಪ ನಿರ್ದೇಶಕರ ಕಚೇರಿಗಳಲ್ಲಿನ ದೈನಂದಿನ ಆಡಳಿತದ ಮೇಲುಸ್ತುವಾರಿಯನ್ನು ಮಾತ್ರ ಆಯಾ ವಿಭಾಗದ ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಮತ್ತು ಸಂಬಂಧಿಸಿದ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರ ವ್ಯಾಪ್ತಿಗೆ ಒಳಪಡಿಸಲಾಗಿದ್ದು, ಸದರಿ ಸುತ್ತೋಲೆಯಿಂದ ಆಡಳಿತ ನಿರ್ವಹಣೆಯಲ್ಲಿ ಯಾವುದೇ ವಿಳಂಬ ಮತ್ತು ವಿದ್ಯಾರ್ಥಿಗಳ ಗುಣಾತ್ಮಕ ಶಿಕ್ಷಣಕ್ಕೆ ತೊಂದರೆಯಾಗಿರುವುದಿಲ್ಲ.

**ಇಪಿ 32 ಎಸ್‌ಎಲ್‌ಬಿ 2024**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.**